# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.14/ಪಿಆರ್: 09 :2020-21    ದಿನಾಂಕ: 26.02.2021

## ಬಾಗಲಗುಂಟೆ ವಾರ್ಡ್-14ರ ವಾರ್ಡ್ ಸಭೆಯ ನಡವಳಿ

ದಿ.26.02.2021 ರಂದು ಬೆಳಗ್ಗೆ 11.30 ಗಂಟೆಗೆ ಶ್ರೀ.ಕೆ.ಮರುಳಸಿದ್ದಪ್ಪ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀ.ವೆಂಕಟೇಶಪ್ಪ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ಬಾಗಲಗುಂಟೆ ವಾರ್ಡ್ ನಂ.14
2. ಶ್ರೀ.ಜನಾರ್ಧನ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ಕೋಶ, ಬಿಬಿಎಂಪಿ, ಬೆಂಗಳೂರು
3. ಶ್ರೀ.ಮೋಹನ್, ಹಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
4. ಶ್ರೀ.ಕಮಲ್ ಗದ್ದಿಮನಿ, ಕಿರಿಯ ಆರೋಗ್ಯ ಪರಿವೀಕ್ಷಕರು, ಬಾಗಲಗುಂಟೆ ಹಾಗೂ ವಾರ್ಡ್ ಸಮಿತಿ ಸದಸ್ಯರು
5. ಶ್ರೀಮತಿ.ವಿದ್ಯಾಶ್ರೀ ಕೆ.ಎಂ, ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಬಾಗಲಗುಂಟೆ
6. ಶ್ರೀ.ವಿಜಯಕುಮಾರ್ ಜೆ, ಮಾರ್ಷಲ್, ಬಿಬಿಎಂಪಿ, ಬೆಂಗಳೂರು
7. ಶ್ರೀ.ಸಂಜೀವಪ್ಪ, ಅರಣ್ಯ ಇಲಾಖೆ, ಬಿಬಿಎಂಪಿ, ಬೆಂಗಳೂರು
8. ಸಾಧಿಕಾ, ಆರೋಗ್ಯ ವೈದ್ಯಾಧಿಕಾರಿಗಳು, ಬಾಗಲಗುಟೆ
9. ಶ್ರೀ.ಮೂಡಲಗಿರಿಯಪ್ಪ, ಅಧ್ಯಕ್ಷರು, ಸೌಂದರ್ಯ ನಗರ ಕ್ಷೇಮಾಭಿವೃದ್ಧಿ ಸಂಘ
10. ಶ್ರೀ.ಕೃಷ್ಣಮೂರ್ತಿ, ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ

ಶ್ರೀ.ಕೆ.ಮರುಳಸಿದ್ದಪ್ಪ, ನೋಡೆಲ್ ಅಧಿಕಾರಿ, ವಾರ್ಡ್ ನಂ.14, ಬಾಗಲಗುಂಟೆ ರವರು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಜರಿದ್ದ ಅಧಿಕಾರಿಗಳನ್ನು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ಶ್ರೀ.ಕೃಷ್ಣಮೂರ್ತಿ, ಡಿಫೆನ್ಸ್ ಕಾಲೋನಿ, ನಾಗರೀಕ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು ರವರು ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಕೈಗೊಂಡಿದ್ದು, ಯಾವ ಯಾವ ಸ್ಥಳಗಳಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗಿರುತ್ತದೆ ಎಂಬ ಬಗ್ಗೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ಒಣಕಸಕ್ಕೆ ಬೆಳಗ್ಗೆ 5.00 ಗಂಟೆ ಸಮಯದಲ್ಲಿ ಘನತ್ಯಾಜ್ಯ ಇಲಾಖೆಗೆ ಸಂಬಂಧಪಟ್ಟ ಪೌರಕಾರ್ಮಿಕರು ಬೆಂಕಿ ಹಾಕುತ್ತಿರುತ್ತಾರೆ ಇದನ್ನು ನಿಲ್ಲಿಸಬೇಕು ಎಂದು ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಸಹಾಯಕ ಅಭಿಯಂತರರು ಪ್ರತಿಕ್ರಿಯಿಸಿ ಬಾಗಲಗುಂಟೆ ಮಾರಮ್ಮ ದೇವಸ್ಥಾನದಿಂದ ಮಂಜುನಾಥ ನಗರವರೆಗೆ ಹಾಗೂ ರಾಮಯ್ಯ ಬಡಾವಣೆಗಳಲ್ಲಿ ಹಾಗೂ ಸೋಪ್ ಫ್ಯಾಕ್ಟರಿ ಬಡಾವಣೆ ಮತ್ತು ಮುನಿಕೊಂಡಪ್ಪ ಬಡಾವಣೆಗಳ ರಸ್ತೆಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ಎಂದು ಸಭೆಯಲ್ಲಿ ತಿಳಿಸಿದರು. ಒಣಕಸಕ್ಕೆ ಬೆಂಕಿ ಹಾಕುತ್ತಿರುವ ಬಗ್ಗೆ ಕೂಡಲೇ ಪರಿಶೀಲಿಸಿ ಅಗತ್ಯ ಕ್ರಮವಹಿಸುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀ.ಜನಾರ್ಧನ್, ಸ.ಕಾ.ಅ ಘನತ್ಯಾಜ್ಯ ನಿರ್ವಹಣಾ ಕೋಶ ರವರಿಗೆ ನೋಡೆಲ್ ಅಧಿಕಾರಿಗಳು ಸೂಚಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖಾ ವತಿಯಿಂದ ಕೇಬಲ್ ಅಳವಡಿಸುತ್ತಿದ್ದು, ಸಂಬಂಧಪಟ್ಟ ಗುತ್ತಿಗೆದಾರರು ಮನಸ್ಸಿಗೆ ಬಂದಂತೆ ಕಾಮಗಾರಿ ನಿರ್ವಹಿಸುತ್ತಿದ್ದು, ಮನಸೋ ಇಚ್ಛೆ ಎಲ್ಲಿಬೇಕೆಂದರಲ್ಲಿ ಗುಂಡಿಗಳನ್ನು ತೆಗೆದು ರಸ್ತೆಯ ಮೇಲ್ಭಾಗದಲ್ಲಿ ಮಣ್ಣಿನ ರಾಶಿ ಹಾಕಿರುವುದು ಕಂಡುಬಂದಿದ್ದು ಇದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತುಂಬಾ ತೊಂದರೆ ಉಂಟಾಗುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು. ಸದರಿ ವಿಷಯದ ಬಗ್ಗೆ ಬೆಸ್ಕಾಂ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳಿಗೆ ಕ್ರಮವಹಿಸುವಂತೆ ತಿಳಿಸಲು ನೋಡೆಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ವಾರ್ಡ್ ಅಭಿಯಂತರರು ತುರ್ತು ಕ್ರಮವಹಿಸುವ ಬಗ್ಗೆ ಸಭೆಯಲ್ಲಿ ತಿಳಿಸಿದರು.



Scanned with CamScanner

ಬಾಗಲಗುಂಟೆ

## 2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ ಬಾಗಲಗುಂಟೆ ವಾರ್ಡ್ ನಂ.14ರ ವ್ಯಾಪ್ತಿಯಲ್ಲಿ ಒಟ್ಟು ಪಾಸಿಟಿವ್ ಕೇಸ್ 2504, ಬಿಡುಗಡೆ 2534 ಹಾಗೂ ಒಟ್ಟು Active case ಪ್ರಕರಣಗಳು 4 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಹಾಗೂ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ರೂ.250.00 ಗಳನ್ನು ದಂಡ ವಿಧಿಸಿ ಕ್ರಮ ಜರುಗಿಸಲಾಗುತ್ತಿರುತ್ತದೆ ಎಂದು ಸಭೆಯಲ್ಲಿ ವಿವರಿಸಿದರು.

## 3. ವಾರ್ಡ್ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಹಾಗೂ ರಸ್ತೆಗುಂಡಿ ಮುಚ್ಚುವ ಬಗ್ಗೆ.

ಬಾಗಲಗುಂಟೆ ವಾರ್ಡ್ ನಂ.14ರಲ್ಲಿ ಈಗಾಗಲೇ ಸಿಡೇದಹಳ್ಳಿ ಮುಖ್ಯರಸ್ತೆ, ಡಿಫೆನ್ಸ್ ಕಾಲೋನಿ, ಮುನೇಶ್ವರನಗರ ರಸ್ತೆಗಳಲ್ಲಿ ಡಾಂಬರೀಕರಣ ಕಾಮಗಾರಿ ಹಾಗೂ ಬಾಕಿ ಉಳಿದಿರುವ ಬಡಾವಣೆಗಳಲ್ಲಿ ರಸ್ತೆಗುಂಡಿ ಮುಚ್ಚುವ ಕಾಮಗಾರಿಯನ್ನು ತುರ್ತಾಗಿ ಕೈಗೊಳ್ಳುವುದಾಗಿ ವಾರ್ಡ್ ಅಭಿಯಂತರರರು ಸಭೆಯಲ್ಲಿ ತಿಳಿಸಿದರು.

## 4. ಬಿಬಿಎಂಪಿಯ 2021-22ನೇ ಸಾಲಿನ ಆಯವ್ಯಯಕ್ಕೆ ಪೂರಕವಾದ ಸಲಹೆ/ಸೂಚನೆ ಬಗ್ಗೆ.

2021-22ನೇ ಸಾಲಿನ ಆಯವ್ಯಯಕ್ಕೆ ಸಂಬಂಧಪಟ್ಟಂತೆ ವಾರ್ಡ್ ವ್ಯಾಪ್ತಿಯಲ್ಲಿ ಈ ಕೆಳಕಂಡ ಕಾಮಗಾರಿಗಳನ್ನು ಕೈಗೊಳ್ಳಲು ವಾರ್ಡ್ ಸದಸ್ಯರುಗಳು ಸಭೆಯಲ್ಲಿ ಚರ್ಚಿಸಿದರು.

a) ಡಿಫೆನ್ಸ್ ಕಾಲೋನಿ ಮತ್ತು ಹಾವನೂರು ಬಡಾವಣೆಯಲ್ಲಿ ಉಳಿಕೆ ರಸ್ತೆಗಳಿಗೆ ಡಾಂಬರೀಕರಣ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ.
b) ರಾಜಕಾಲುವೆ ಕಾಮಗಾರಿ ಯೋಜನೆ ಅಡಿಯಲ್ಲಿ ಬಾಗಲಗುಂಟೆಯಲ್ಲಿ 4 ಸೇತುವೆಗಳನ್ನು ನಿರ್ಮಿಸುವ ಬಗ್ಗೆ.
c) ಬೋನ್‌ಮಿಲ್ ಬಸ್ ನಿಲ್ದಾಣ, ಬಾಗಲಗುಂಟೆ ಬಸ್ ನಿಲ್ದಾಣ, ವಾರ್ಡ್ ವ್ಯಾಪ್ತಿಯ ಪಾರ್ಕ್‌ಗಳಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಾಣ ಕಾಮಗಾರಿ ಕೈಗೊಳ್ಳುವ ಬಗ್ಗೆ.
d) ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸುವ ಬಗ್ಗೆ.
e) ಬಾಗಲಗುಂಟೆ ವಾರ್ಡ್ ವ್ಯಾಪ್ತಿಯಲ್ಲಿ 4 ಆರ್.ಓ ಪ್ಲಾಂಟ್‌ಗಳನ್ನು ನಿರ್ಮಾಣ ಮಾಡುವ ಬಗ್ಗೆ.
f) 110 ಹಳ್ಳಿ ವ್ಯಾಪ್ತಿಯ ಸಿಡೇದಹಳ್ಳಿಯಲ್ಲಿ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿ ಕೈಗೊಳ್ಳುವ ಬಗ್ಗೆ.
g) ಬಾಗಲಗುಂಟೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳಾದ ಬಿಟಿಎಸ್ ಬಡಾವಣೆ, ವಿಶ್ವೇಶ್ವರಯ್ಯ ಬಡಾವಣೆ, ಶೇಷಾದ್ರಿ ಬಡಾವಣೆಗಳಲ್ಲಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ಸದಸ್ಯರು ಕೋರಿದ ಮೇರೆಗೆ ಅಗತ್ಯ ಕ್ರಮವಹಿಸುವಂತೆ ವಾರ್ಡ್ ಅಭಿಯಂತರರಿಗೆ ನೋಡೆಲ್ ಅಧಿಕಾರಿಗಳು ಸೂಚಿಸಿದರು.

## 5. ಇತರೆ ವಿಷಯಗಳ ಬಗ್ಗೆ.

1. ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂ ಇಲಾಖೆ ಹಾಗೂ ಅರಣ್ಯ ಇಲಾಖೆ ರವರು ಮರಗಳನ್ನು ಕತ್ತರಿಸಿ, ಕತ್ತರಿಸಿದ ಭಾಗಗಳನ್ನು ತೆರವುಗೊಳಿಸದೇ ರಸ್ತೆಗಳಲ್ಲಿಯೇ ಬಿಟ್ಟು ಹೋಗುತ್ತಿದ್ದು, ಇದರಿಂದ ವಾಹನ ಸಂಚಾರಕ್ಕೆ ಹಾಗೂ ಸಾರ್ವಜನಿಕ ಓಡಾಟಕ್ಕೆ ತೊಂದರೆ ಉಂಟಾಗುತ್ತಿರುವ ಬಗ್ಗೆ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರುಗಳು ತಿಳಿಸಿದರು. ಈ ಬಗ್ಗೆ ಸಂಬಂಧಪಟ್ಟಂತಹ ಬೆಸ್ಕಾಂ ಇಲಾಖೆ ರವರ ಗಮನಕ್ಕೆ ತರಲು ವಾರ್ಡ್ ಅಭಿಯಂತರರಿಗೆ ನೋಡೆಲ್ ಅಧಿಕಾರಿಗಳು ಸೂಚಿಸಿದರು.

2. ಹಾಲಿ ವಾರ್ಡ್ ವ್ಯಾಪ್ತಿಯಲ್ಲಿ 97 ಜನ ಪೌರಕಾರ್ಮಿಕರು ಕಾರ್ಯ ನಿರ್ವಹಿಸುತ್ತಿದ್ದು, ಹೊಸದಾಗಿ 110 ಹಳ್ಳಿಗಳ ಪೈಕಿ ಸಿಡೇದಹಳ್ಳಿಯೂ ಬಿಬಿಎಂಪಿ ವ್ಯಾಪ್ತಿಗೆ ಒಳಪಟ್ಟಿದ್ದು, ವಾರ್ಡ್ ವ್ಯಾಪ್ತಿ ಹೆಚ್ಚಾಗಿರುವ ಕಾರಣ ಪೌರ ಕಾರ್ಮಿಕರ ಕೊರತೆಯಿಂದ ಘನತ್ಯಾಜ್ಯಕ್ಕೆ ಸಂಬಂಧಪಟ್ಟಂತೆ ಸಮರ್ಪಕವಾಗಿ ಕಾರ್ಯ ನಿರ್ವಹಿಸಲು ಕಷ್ಟಕರವಾಗಿರುವುದರಿಂದ ಹೆಚ್ಚುವರಿಯಾಗಿ 143 ಪೌರ ಕಾರ್ಮಿಕರುಗಳ ಅವಶ್ಯಕತೆ ಇರುವುದಾಗಿ ಸಭೆಯಲ್ಲಿ ಚರ್ಚಿಸಲಾಯಿತು ಈ ಬಗ್ಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣಾ ಕೋಶರವರು ಪ್ರತಿಕ್ರಿಯಿಸಿ, ಹೊಸ ಟೆಂಡರ್‌ನಲ್ಲಿ ಹೆಚ್ಚುವರಿ ಪೌರಕಾರ್ಮಿಕರನ್ನು ಒದಗಿಸಿಕೊಳ್ಳಲು ಕ್ರಮವಹಿಸುವುದಾಗಿ ತಿಳಿಸಿದರು.

Scanned with CamScanner

ಅಂತಿಮವಾಗಿ ನೋಡೆಲ್ ಅಧಿಕಾರಿ ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

26/02/2021

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 14, ಬಾಗಲಗುಂಟೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

26/02/2021

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು, ವಾ.ನಂ.14, ಬಾಗಲಗುಂಟೆ
ಮತ್ತು ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

<u>ಅಧಿಕಾರಿಗಳ ಮಾಹಿತಿಗಾಗಿ</u>

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.

Scanned with CamScanner